ಗೌರಿಬಿದನೂರು ತಾಲ್ಲೂಕಿನಲ್ಲಿ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸುವ ಬಗ್ಗೆ

574 (990) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು):– ಮಾನ್ಯ ಸಮಾಜ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಗೌರಿಬಿದನೂರು ತಾಲ್ಲೂಕು, ತೊಂಡೇಬಾವಿ ಹೋಬಳಿಗಳಲ್ಲಿ ಅನೇಕ ಶಾಲಾಕಾಲೇಜುಗಳಿದ್ದು, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಬಡ ವಿದ್ಯಾರ್ಥಿಗಳಿಗೆ ತಂಗಲು ವಿದ್ಯಾರ್ಥಿನಿಲಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಕಳೆದ ಕೆಲವಾರು ವರ್ಷಗಳಿಂದ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದರೂ ಸಹ ಇದೂವರೆಗೂ ಮಂಜೂರಾತಿ ದೊರೆಯದಿರುವುದಕ್ಕೆ ಕಾರಣಗಳೇನು;

ಇ) ಪ್ರಸಕ್ತ ವರ್ಷದಲ್ಲಿಯಾದರೂ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು;

ಈ) ಗೌರಿಬಿದನೂರು ತಾಲ್ಲೂಕು 2008–09ರ ಸಾಲಿನಲ್ಲಿ ಸುಮಾರು 16 ಜನರಿಗೆ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿಗಳನ್ನು ಕೊರೆದಿದ್ದರೂ ಸಹ ಇದೂವರೆವಿಗೂ ಪಂಪ್‌ಸೆಟ್‌ಗಳನ್ನು ಪೂರೈಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಪೂರೈಸದಿರಲು ಕಾರಣಗಳೇನು;

ಉ) ಕೊಳವೆ ಬಾವಿಗಳನ್ನು ಕೊರೆಸಿರುವ ಫಲಾನುಭವಿಗಳಿಗೆ ಶೀಘ್ರವಾಗಿ ವಿದ್ಯುತ್ ಸಂಪರ್ಕ ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕೆಲವು ಸಂದರ್ಭಗಳಲ್ಲಿ ವರ್ಷಗಳಗಟ್ಟಲೇ ವಿದ್ಯುತ್ ಸಂಪರ್ಕ ನೀಡದೆ ವಿಳಂಬ ಮಾಡುವುದಕ್ಕೆ ಕಾರಣಗಳೇನು; ಇದನ್ನು ಸರಿಪಡಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು)–

ಅ) ಹೌದು

ಆ) ಮತ್ತು ಇ) ವಿದ್ಯಾರ್ಥಿನಿಲಯಗಳನ್ನು ಹೊಸದಾಗಿ ಪ್ರಾರಂಭಿಸುವ ಬಗ್ಗೆ ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು;

ಈ) ಡಾ॥ ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ಗೌರಿಬಿದನೂರು ತಾಲ್ಲೂಕಿನಲ್ಲಿ ಗಂಗಾಕಲ್ಯಾಣ ಯೋಜನೆಯಡಿಯಲ್ಲಿ 2008–09ನೇ ಸಾಲಿನಲ್ಲಿ 16 ಕೊಳವೆ ಬಾವಿಗಳನ್ನು ಕೊರೆಸಲಾಗಿದ್ದು ಗುತ್ತಿಗೆದಾರರು ನಿಯಮಗಳನ್ನು ಪಾಲಿಸದೆ ಕೊಳವೆ ಬಾವಿಗಳನ್ನು ಕೊರೆದಿದ್ದರಿಂದ ಗುತ್ತಿಗೆದಾರರಿಗೆ ಹಣ ಪಾವತಿಸಲು ತಡೆಹಿಡಿಯಲಾಗಿತ್ತು. ತದನಂತರ ಸ್ಥಳ ಪರಿಶೀಲನೆ ನಡೆಸಿ, ಪಂಪ್‌ಸೆಟ್ ಕಂಪನಿಗೆ ಪಂಪ್ ಸೆಟ್ ಸರಬರಾಜು ಮಾಡಲು ಆದೇಶ ನೀಡಲಾಗಿದೆ. ಸರಬರಾಜು ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಲಾಗುವುದು.

ಉ) ಹೌದು, ಕೊಳವೆ ಬಾವಿಗಳನ್ನು ಕೊರೆದ ನಂತರ ವಿದ್ಯುತ್ ಸಂಪರ್ಕ ಕಲ್ಪಿಸಲು ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ನೊಂದಾವಣೆ

ಮಾಡಲಾಗುತ್ತದೆ. ಆಯಾ ಸ್ಥಳದಲ್ಲಿನ ವಿದ್ಯುತ್ ಮಾರ್ಗಗಳ ಲಭ್ಯತೆ ಮೇರೆಗೆ ಸಂಪರ್ಕ ಕಲ್ಪಿಸುವ ಅವಧಿ ಹೆಚ್ಚು ಕಡಿಮೆಯಾಗುತ್ತದೆ.

ಈ ವಿಳಂಬ ತಪ್ಪಿಸಲು ಸರ್ಕಾರವು ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ 2009–10ನೇ ಸಾಲಿನಲ್ಲಿ ಗೌರಿಬಿದನೂರು ತಾಲ್ಲೂಕಿಗೆ ರೂ. 17.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. 2010–11ನೇ ಸಾಲಿನಲ್ಲಿ ರೂ. 28.50 ಲಕ್ಷಗಳನ್ನು ನಿಗದಿಪಡಿಸಲಾಗಿದೆ. ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಗಳನ್ನು ಸಂಪರ್ಕಿಸಿ ತ್ವರಿತವಾಗಿ ವಿದ್ಯುತ್ ಸೌಲಭ್ಯ ಕಲ್ಪಿಸುವ ಬಗ್ಗೆ ಜರೂರು ಕ್ರಮ ಜರುಗಿಸಲಾಗುತ್ತಿದೆ.

ಸರ್ಕಾರದ ಅನುದಾನ

575 (991) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು):– ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) 2009–10ನೇ ಸಾಲಿನಲ್ಲಿ ಗೌರಿಬಿದನೂರು ತಾಲ್ಲೂಕಿನಲ್ಲಿ ಅಲ್ಪಸಂಖ್ಯಾತರ ಎಷ್ಟು ಮನೆಗಳ ಅಭಿವೃದ್ಧಿಗಾಗಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ. (ಗ್ರಾಮವಾರು ವಿವರ ನೀಡುವುದು);

ಆ) ಗೌರಿಬಿದನೂರು ಪಟ್ಟಣದಲ್ಲಿ ಸುಮಾರು 1 ಕೋಟಿ ವೆಚ್ಚದಲ್ಲಿ ಶಾದಿಮಹಲ್ ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;